ಅಪರ  ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ನ್ಯಾಯಾಲಯ,
ಕುಣಿಗಲ್.

ಸಿ.ಸಿ.ನಂ.4534/2023

ಸಿ.ಡಬ್ಲ್ಯೂ -03
ಪಿ.ಡಬ್ಲ್ಯೂ-03

ಸಾಕ್ಷಿದಾರನ ಹೆಸರು :- ಮೋಹನ ಕುಮಾರ
ತಂದೆಯ ಹೆಸರು :- ಲೇಟ್ ರಾಮಣ್ಣ
ವಯಸ್ಸು :- 47 ವರ್ಷ
ಉದ್ಯೋಗ :- ಆಟೋ ಚಾಲಕ
ವಾಸ :- ಚಿಕ್ಕಮದೂರೆ

**ಸಾಕ್ಷಿಗೆ ದಿಃ 28.07.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ ರವರಿಂದ.**

ಚಾಸಾ 1 ಮತ್ತು 2 ಹಾಗೂ ಆರೋಪಿ ನನಗೆ ಗೊತ್ತಿಲ್ಲ. ನನಗೆ ಪ್ರಕರಣದ ಬಗ್ಗೆ ಏನು ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು ಅನುಮತಿ ನೀಡಿಲಾಗಿದೆ. )**

**ಪಾಟೀ ಸವಾಲುಃ ಸಹಾಯಕ ಅಭಿಯೋಜಕರಿಂದಃ**

ದಿಃ 16.10.2020 ರಂದು ಬೆಳಿಗ್ಗೆ 10.30 ರ ಸಮಯದಲ್ಲಿ ನಾನು ಕೊಡವತ್ತಿಗೆ ಬಾಡಿಗೆಗೆ ಹೋಗುತ್ತಿರುವಾಗ ರಾದಾ ಅವರ ತೆಂಗಿನ ತೋಟದಲ್ಲಿ ಗಲಾಟೆ ಶಬ್ದ ಕೇಳಿ ಹೋಗಿ ನೋಡಲಾಗಿ ಚಾಸಾ 2 ಅವರು ಆರೋಪಿಯನ್ನು ಏಕೆ ನಮ ಅಕ್ಕನ ತೋಟದಲ್ಲಿ ಕಾಯಿ ಕಿಳುತ್ತಿದ್ದೇಯಾ ಎಂದು ಕೇಳಿದ್ದಕ್ಕೆ ಆರೋಪಿ ಅವರಿಗೆ ಅವಾಚ್ಯ ಶಬ್ದಗಳಿಂದ ಬೈದು ಕಾಲಿನಿಂದ ಒದ್ದು ಕೆಳಗೆ ಬಿಳಿಸಿದ್ದು ನಂತರ ರಿಫಿಜ್ ಪಟ್ಟಿಯಿಂದ ಎರಡು ಕೈಗಳಿಗೆ ಮತ್ತು ಬೆನ್ನಿಗೆ ಹೊಡೆದಿರುತ್ತಾನೆ ಎಂದರೆ ಸರಿಯಲ್ಲ.

ಚಾಸಾ 2 ಅವರು ಬಟ್ಟೆಯನ್ನು ಹಿಡಿದು ಎಳೆದು ಹಾಕಿ ಅವಮಾನ ಮಾಡಿರುತ್ತಾನೆ ಎಂದರೆ ಸರಿಯಲ್ಲ. ನಂತರ ನನ್ನ ತಂಟೆಗೆ ಬಂದರೆ ನಿನ್ನನ್ನು ಮತ್ತು ನಿನ್ನ ಗಂಡನನ್ನು ಪೆಟ್ರೋಲ್ ಹಾಕಿ ಸುಟ್ಟು ಹಾಕುತ್ತೇನೆಂದು ಕೊಲೆ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ಈ ಕುರಿತು ದಿಃ 19.10.2020 ರಂದು ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ್ನು ನಿ.ಪಿ 3 ಎಂದು ಗುರುತಿಸಲಾಯಿತು. ನನಗೆ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇಲ್ಲರೂ ಸಹ ನಾನು ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ಪಾಟೀ ಸವಾಲು ಇಲ್ಲವೆಂದು ನಿವೇದಿಸಿಕೊಂಡಿರುತ್ತಾರೆ.**

**ಮರು ವಿಚಾರಣೆ ಇಲ್ಲಃ**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ.

ಸಹಿ/-

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.

ಕುಣಿಗಲ್.